ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1893
2. ಮಾನ್ಯ ಸದಸ್ಯರ ಹೆಸರು : ಶ್ರೀ ಆರ್.ಬಿ.ತಿಮ್ಮಾಪೂರ(ವಿಧಾನಸಭೆಯಿಂದ ಚುನಾಯಿತರಾದವರು)
3. ಉತ್ತರಿಸಬೇಕಾದ ದಿನಾಂಕ : 15.03.2022
4. ಉತ್ತರಿಸುವ ಸಚಿವರು : ಕೈಮಗ್ಗ ಮತ್ತು ಜವಳಿ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವರು

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>(ಅ)</td><td>ರಾಜ್ಯದಲ್ಲಿರುವ ಒಟ್ಟು ಸಕ್ಕರೆ ಕಾರ್ಖಾನೆಗಳೆಷ್ಟು; ಆ ಪೈಕಿ ಸರ್ಕಾರಿ ಸ್ವಾಮ್ಯದ ಸಕ್ಕರೆ ಕಾರ್ಖಾನೆಗಳಾವುವು;</td><td>ಪ್ರಸ್ತುತ ರಾಜ್ಯದಲ್ಲಿ ಒಟ್ಟು 89 ನೋಂದಾಯಿತ ಸಕ್ಕರೆ ಕಾರ್ಖಾನೆಗಳು ಇರುತ್ತವೆ. ಇವುಗಳ ಪೈಕಿ ದಿ ಮೈಸೂರು ಷುಗರ್ ಕಂಪನಿ ಲಿ., ಮಂಡ್ಯ ಮತ್ತು ಎಂ.ಪಿ.ಎಂ. ಶುಗರ್ಸ್ ಲಿ., ಭದ್ರಾವತಿ ಈ ಎರಡು ಕಾರ್ಖಾನೆಗಳು ರಾಜ್ಯ ಸರ್ಕಾರಿ ಸ್ವಾಮ್ಯದಲ್ಲಿರುತ್ತವೆ.</td></tr>
<tr><td>(ಆ)</td><td>ಸಂಪೂರ್ಣವಾಗಿ ಮುಚ್ಚಿರುವ ಕಾರ್ಖಾನೆಗಳೆಷ್ಟು; ಅದಕ್ಕೆ ಕಾರಣಗಳೇನು;</td><td>ಪ್ರಸ್ತುತ ರಾಜ್ಯದಲ್ಲಿ ಒಟ್ಟು 17 ಸಕ್ಕರೆ ಕಾರ್ಖಾನೆಗಳು ಸ್ಥಗಿತಗೊಂಡಿದ್ದು, ವಿವರಗಳು ಈ ಕೆಳಕಂಡಂತಿವೆ.
<table><tr><th>ಕ್ರ.ಸಂ.</th><th>ವಲಯ</th><th>ಸಂಖ್ಯೆ</th></tr><tr><td>1.</td><td>ಸಾರ್ವಜನಿಕ ವಲಯ</td><td>02</td></tr><tr><td>2.</td><td>ಜಂಟಿವಲಯ</td><td>01</td></tr><tr><td>3.</td><td>ಸಹಕಾರಿ(ಸ್ಥಗಿತ)</td><td>04</td></tr><tr><td>4.</td><td>ಸಹಕಾರಿ (ಸಮಾಪನೆ)</td><td>04</td></tr><tr><td>5.</td><td>ಖಾಸಗಿ</td><td>06</td></tr><tr><td colspan="2">ಒಟ್ಟು</td><td>17</td></tr></table>
ಮೇಲ್ಕಂಡ ಕಾರ್ಖಾನೆಗಳು ಸ್ಥಗಿತಗೊಳ್ಳಲು/ಮುಚ್ಚಲು ಪ್ರಮುಖವಾಗಿ ಈ ಕೆಳಕಂಡ ಕಾರಣಗಳನ್ನು ಗುರುತಿಸಬಹುದಾಗಿದೆ.
1. ಕಾರ್ಖಾನೆಗಳಲ್ಲಿ ದುಡಿಯುವ ಬಂಡವಾಳದ ಕೊರತೆ ಉಂಟಾಗಿರುವುದು ಮತ್ತು ಹಣಕಾಸು ಸಂಸ್ಥೆಗಳಿಂದ ಆರ್ಥಿಕ ನೆರವು ಪಡೆಯುವಲ್ಲಿ ವಿಫಲವಾಗಿರುವುದು.
2. ಕಾರ್ಖಾನೆಯ ಸಾಮರ್ಥ್ಯಕ್ಕೆ ಅನುಗುಣವಾಗಿ ಕಬ್ಬು ಮೀಸಲು ಕ್ಷೇತ್ರದಲ್ಲಿ ಕಬ್ಬಿನ ಲಭ್ಯತೆ ಇಲ್ಲದಿರುವುದು.
3. ಕಾರ್ಖಾನೆಗಳು ಹೊಂದಿರುವ ಆಸ್ತಿಗಿಂತ ಸಾಲ ಮತ್ತು ಹೊಣೆಗಾರಿಕೆಗಳು ಹೆಚ್ಚಾಗಿರುವುದು ಮತ್ತು ಕ್ರೋಢೀಕೃತ ನಷ್ಟ ಉಂಟಾಗಿರುವುದು.
4. ಕಾರ್ಖಾನೆಗಳಲ್ಲಿ ಅಗತ್ಯಕ್ಕಿಂತ ಹೆಚ್ಚಿನ ಸಿಬ್ಬಂದಿ ನೇಮಕ ಮಾಡಿಕೊಂಡಿರುವುದರಿಂದ ಸಿಬ್ಬಂದಿಗಳ ವೇತನ ಮತ್ತು ಭತ್ಯೆಗಳ ಹೊರೆ ಹೆಚ್ಚಾಗಿರುವುದು.
5. ಆಧುನಿಕ ತಂತ್ರಜ್ಞಾನವನ್ನು ಒಳಗೊಂಡ ಯಂತ್ರೋಪಕರಣಗಳನ್ನು ಅಳವಡಿಸಿಕೊಳ್ಳದೇ ಇರುವುದು.
6. ಆಡಳಿತ ಮಂಡಳಿಗಳು ಸಮರ್ಪಕವಾಗಿ ಕಾರ್ಯ ನಿರ್ವಹಣೆ ಮಾಡದಿರುವುದು ಹಾಗೂ ಇನ್ನಿತರೆ ಕಾರಣಗಳು.</td></tr>
</table>

(ಇ)	ಮುಚ್ಚಲ್ಪಟ್ಟಿರುವ ಸಕ್ಕರೆ ಕಾರ್ಖಾನೆಗಳನ್ನು ಪುನಃ ಪ್ರಾರಂಭಿಸಲು ಸರ್ಕಾರ ಕ್ರಮ ಕೈಗೊಳ್ಳಲಿದೆಯೇ?	ದುಡಿಯುವ ಬಂಡವಾಳದ ಕೊರತೆ ಮತ್ತು ಆರ್ಥಿಕ ನಷ್ಟದಿಂದ ಹಾಗೂ ಇನ್ನಿತರೆ ಆಡಳಿತಾತ್ಮಕ ಕಾರಣಗಳಿಂದಾಗಿ ಸ್ಥಗಿತಗೊಂಡಿರುವ ಸಹಕಾರಿ ಸಕ್ಕರೆ ಕಾರ್ಖಾನೆಗಳನ್ನು ಕಬ್ಬು ಬೆಳೆಗಾರ ರೈತರ ಮತ್ತು ಕಾರ್ಮಿಕರ ಹಿತದೃಷ್ಟಿಯಿಂದ ಖಾಸಗಿಯವರಿಗೆ ದೀರ್ಘಾವಧಿಯ ಮೇಲೆ ಗುತ್ತಿಗೆ ನೀಡುವುದರ ಮೂಲಕ ಪುನಃಶ್ಚೇತನಗೊಳಿಸುವುದು ಸರ್ಕಾರದ ಪ್ರಸ್ತುತ ನೀತಿಯಾಗಿರುತ್ತದೆ. ಅದರಂತೆ ಇದುವರೆಗೆ 9 ಸಹಕಾರಿ ಸಕ್ಕರೆ ಕಾರ್ಖಾನೆಗಳನ್ನು LROT (Lease Rehabilitate Operate Transfer) ಮತ್ತು BOOT (Build Own Operate Transfer) ಆಧಾರದ ಮೇಲೆ ಖಾಸಗಿಯವರಿಗೆ ಗುತ್ತಿಗೆ ನೀಡಲಾಗಿದೆ. ಆ ಮೂಲಕ ರೈತರ ಮತ್ತು ಕಾರ್ಮಿಕರ ಹಿತ ಕಾಪಾಡುವುದರೊಂದಿಗೆ ನಷ್ಟದಲ್ಲಿರುವ ಸಕ್ಕರೆ ಕಾರ್ಖಾನೆಗಳನ್ನು ಪುನಶ್ಚೇತಗೊಳಿಸಲಾಗಿದೆ. ಖಾಸಗಿ ವಲಯದ ಸಕ್ಕರೆ ಕಾರ್ಖಾನೆಗಳನ್ನು ಪುನಶ್ಚೇತನಗೊಳಿಸುವ ವಿಷಯವು ಆಯಾ ಸಂಬಂಧಪಟ್ಟ ಆಡಳಿತ ಮಂಡಳಿಗಳೇ ನಿರ್ಣಯಿಸಬೇಕಾಗಿರುತ್ತದೆ. ಖಾಸಗಿ ಸಕ್ಕರೆ ಕಾರ್ಖಾನೆಗಳ ಪುನಶ್ಚೇತನದ ವಿಷಯದಲ್ಲಿ ರಾಜ್ಯ ಸರ್ಕಾರವು ಹಸ್ತಕ್ಷೇಪ ಮಾಡಲು ಅವಕಾಶವಿರುವುದಿಲ್ಲ.

ಸಂಖ್ಯೆ: ಸಿಐ 40 ಎಸ್‌ಜಿಎಫ್ 2022

(ಶಂಕರ.ಬಿ.ಪಾಟೀಲ ಮುನೇನಕೊಪ್ಪ)
ಕೈಮಗ್ಗ ಮತ್ತು ಜವಳಿ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವರು